Online Diary Details

**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ: ಕೇಂದ್ರ ಕಛೇರಿ: ಬೆಂಗಳೂರು**
**ಸಂಚಾರ (ವಾಣಿಜ್ಯ) ಇಲಾಖೆ**

**ಸಂ:ಕರಾಸಾ:ಕೇಕ:ಸಂ:ಸಿ2:1170: 458 :2023-24** **ದಿನಾಂಕ: 14.06.2023**

ಮಂಡಳಿ ಕಾರ್ಯದರ್ಶಿಗಳು / ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿಗಳು,
ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ,
ಕೇಂದ್ರ ಕಛೇರಿ,
ಬೆಂಗಳೂರು-27.

ಮಾನ್ಯರೇ,

ವಿಷಯ: ವಿದ್ಯಾರ್ಥಿ ಬಸ್ ಪಾಸ್ ಅವಧಿ ವಿಸ್ತರಿಸಿರುವ ಬಗ್ಗೆ.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿದ್ಯಾರ್ಥಿಗಳಿಗೆ ಶಾಲಾ ಕಾಲೇಜುಗಳು ಜೂನ್-2023ರ ಮಾಹೆಯಲ್ಲಿ ಪ್ರಾರಂಭಗೊಂಡಿದ್ದು, ವಿದ್ಯಾರ್ಥಿಗಳಿಗೆ ಬಸ್ ಪಾಸ್‌ಗಾಗಿ ಆನ್‌ಲೈನ್ ಅರ್ಜಿ ಸಲ್ಲಿಸಲು ದಿನಾಂಕ: 12.06.2023 ರಿಂದ ಗೋ-ಲೈವ್ ನೀಡಿ ಅವಕಾಶ ಕಲ್ಪಿಸಲಾಗಿರುತ್ತದೆ. ಇದೀಗ, ಪಾಸುಗಳನ್ನು ಪಡೆಯಲು ವಿದ್ಯಾರ್ಥಿಗಳಿಗೆ ಮತ್ತಷ್ಟು ಕಾಲಾವಕಾಶ ನೀಡುವ ಸಲುವಾಗಿ ಎಲ್ಲಾ ವರ್ಗದ ಶಾಲಾ / ಕಾಲೇಜು ವಿದ್ಯಾರ್ಥಿಗಳು ಕಳೆದ ಸಾಲಿನ (2022-23) ಬಸ್ ಪಾಸ್‌ನೊಂದಿಗೆ ಅಥವಾ ಪ್ರಸ್ತುತ ಸಾಲಿನಲ್ಲಿ ಶಾಲಾ / ಕಾಲೇಜುಗಳಿಗೆ ಪಾವತಿಸಿರುವ ರಸೀದಿ ಜೊತೆಗೆ ನಿಗಮದ ಬಸ್ಸುಗಳಲ್ಲಿ ಸಂಬಂಧಪಟ್ಟ ಮಾರ್ಗದಲ್ಲಿ ಅಥವಾ ಹೊಸ ವಿಳಾಸದಲ್ಲಿರುವ ಶಾಲಾ / ಕಾಲೇಜುಗಳಿಗೆ ತೆರಳಲು **"30ನೇ ಜೂನ್ 2023 ರವರೆಗೆ"** ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಈ ಹಿಂದಿನ ವರ್ಷದ ಪಾಸನ್ನು ಹಾಜರುಪಡಿಸಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಈ ಸಂಬಂಧ ಪತ್ರಿಕಾ ಪ್ರಕಟಣೆಯ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ಸದರಿ ಮಾಹಿತಿಯನ್ನು ಸ್ಥಳೀಯ ದಿನಪತ್ರಿಕೆಗಳಲ್ಲಿ ಸುದ್ದಿರೂಪದಲ್ಲಿ ನೀಡಿ ವ್ಯಾಪಕವಾಗಿ ಪ್ರಚಾರ ಮಾಡಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)

14/06.

14/6/23

ಅಡಕ: ಮೇಲಿನಂತೆ

Scanned with OKEN Scanner

# " ಪತ್ರಿಕಾ ಪ್ರಕಟಣೆ "

* * * *

ವಿದ್ಯಾರ್ಥಿಗಳಿಗೆ ಬಸ್ ಪಾಸ್‌ಗಾಗಿ ಆನ್‌ಲೈನ್ ಅರ್ಜಿ ಸಲ್ಲಿಸಲು ದಿನಾಂಕ: 12.06.2023 ರಿಂದ ಗೋ-ಲೈವ್ ನೀಡಿ ಅವಕಾಶ ಕಲ್ಪಿಸಲಾಗಿರುತ್ತದೆ. ಪಾಸುಗಳನ್ನು ಪಡೆಯಲು ವಿದ್ಯಾರ್ಥಿಗಳಿಗೆ ಮತ್ತಷ್ಟು ಕಾಲಾವಕಾಶ ನೀಡುವ ಸಲುವಾಗಿ ಎಲ್ಲಾ ವರ್ಗದ ಶಾಲಾ / ಕಾಲೇಜು ವಿದ್ಯಾರ್ಥಿಗಳು ಕಳೆದ ವರ್ಷದ (2022-23) ಬಸ್ ಪಾಸ್‌ನೊಂದಿಗೆ ಅಥವಾ ಪ್ರಸ್ತುತ ಸಾಲಿನಲ್ಲಿ ಶಾಲಾ / ಕಾಲೇಜುಗಳಿಗೆ ಶುಲ್ಕ ಪಾವತಿಸಿರುವ ರಸೀದಿ ಹಾಜರುಪಡಿಸಿ ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಸಂಬಂಧಪಟ್ಟ ಮಾರ್ಗದಲ್ಲಿ ಅಥವಾ ಹೊಸ ವಿಳಾಸದಲ್ಲಿರುವ ಶಾಲಾ / ಕಾಲೇಜುಗಳಿಗೆ ಉಚಿತವಾಗಿ ತೆರಳಲು <u>"30ನೇ ಜೂನ್ 2023 ರವರೆಗೆ"</u> ಅನುವು ಮಾಡಲಾಗಿದೆ.

ಮುಂದುವರೆದು, ಶಕ್ತಿ ಯೋಜನೆಯಡಿ ವಿದ್ಯಾರ್ಥಿನಿಯರು ರಾಜ್ಯದೊಳಗೆ ಪ್ರಯಾಣಿಸುವಾಗ ಸರ್ಕಾರದಿಂದ ವಿತರಿಸಿರುವ ಯಾವುದಾದರೂ ಗುರುತಿನ ಚೀಟಿಯನ್ನು ತೋರಿಸಿ ಶೂನ್ಯ ಟಿಕೆಟ್ ಪಡೆದು ಪ್ರಯಾಣಿಸಬೇಕಿರುತ್ತದೆ.

ವಿದ್ಯಾರ್ಥಿಗಳು ಸದರಿ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.

**ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)**

# Press Note

The academic activities for the year 2023-24 has already commenced in June-2023. To obtain pass, the students have to submit the application through Sevasindhu which is on Go-Live from 12.06.2023. To facilitate the students to get the pass, the students are permitted to travel free in the buses by producing the school admission receipt or the pass issued for the academic year 2022-23 upto 30.06.2023 in all city, suburban, ordinary and Express services.

However, Girl students may travel free under Shakthi Scheme by obtaining zero ticket from the conductor showing the ID cards issued from the Government. Students are requested to make use of the facility.

**Chief Traffic Manager (Com)**

Scanned with OKEN Scanner